**ಕರ್ನಾಟಕ ಸರ್ಕಾರ**

ಇ-ಕಛೇರಿ ಸಂ: ಇಡಿ 352 ಯುಬಿವಿ 2022

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:23.02.2023

**ಇಂದ**
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ,ಬಹುಮಹಡಿಗಳ ಕಟ್ಟಡ,
ಬೆಂಗಳೂರು

**ಇವರಿಗೆ**
ಕುಲಸಚಿವರು,
ಬೆಂಗಳೂರು ವಿಶ್ವವಿದ್ಯಾಲಯ,
ಜ್ಞಾನ ಭಾರತಿ,
ಬೆಂಗಳೂರು -560056..

ಮಾನ್ಯರೇ,

ವಿಷಯ: ಬೆಂಗಳೂರು ವಿಶ್ವವಿದ್ಯಾಲಯದ ವ್ಯಾಪ್ತಿಯಲ್ಲಿ ಜ್ಯೋತಿ ಸಂಜೆ ಕಾಲೇಜು, ನಂ.40/05, 394/3, ತಾತಗುಣಿ, ಕನಕಪುರ ರಸ್ತೆ, ಬೆಂಗಳೂರು-560082. ಇಲ್ಲಿ 2022-23ನೇ ಸಾಲಿನಿಂದ ಬಿ.ಕಾಂ ಮತ್ತು ಬಿ.ಸಿ.ಎ. ಸ್ನಾತಕ ವ್ಯಾಸಂಗಕ್ರಮದೊಂದಿಗೆ ಕಾಲೇಜನ್ನು ಆರಂಭಿಸಲು ಅನುಮತಿ ನೀಡುವ ಬಗ್ಗೆ.

ಉಲ್ಲೇಖ:-
1. ಸರ್ಕಾರದ ಆದೇಶ ಸಂಖ್ಯೆ: ಇಡಿ 29 ಯುಎನ್ ಇ 2021, ದಿನಾಂಕ:12.02.2021
2. ತಮ್ಮ ಪತ್ರ ಸಂಖ್ಯೆ: ಎಸಿಎ-3/ಎ-3/ಹೊಕಾಪ್ರು/1/2022-23. ದಿನಾಂಕ:28.06.2022.
3. ಸರ್ಕಾರದ ಪತ್ರ ಸಂಖ್ಯೆ:ಇಡಿ 352 ಯುಬಿವಿ 2022, ದಿನಾಂಕ:27.07.2022
4. ಪ್ರಾಂಶುಪಾಲರು, ಜ್ಯೋತಿ ಸಂಜೆ ಕಾಲೇಜು, ತಾತಗುಣಿ, ಕನಕಪುರ ರಸ್ತೆ, ಬೆಂಗಳೂರು ಇವರ ಪತ್ರ ಸಂಖ್ಯೆ:JICM/2022-23/020, ದಿನಾಂಕ:12.09.2022.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ **ಜ್ಯೋತಿ ಸಂಜೆ ಕಾಲೇಜು**, ನಂ.40/05, 394/3, ತಾತಗುಣಿ, ಕನಕಪುರ ರಸ್ತೆ, ಬೆಂಗಳೂರು-560082. ಇಲ್ಲಿ ಬಿ.ಕಾಂ ಮತ್ತು ಬಿ.ಸಿ.ಎ. ಸ್ನಾತಕ ವ್ಯಾಸಂಗಕ್ರಮಗಳೊಂದಿಗೆ 2022-23ನೇ ಶೈಕ್ಷಣಿಕ ಸಾಲಿನಿಂದ ಹೊಸದಾಗಿ ಕಾಲೇಜು ಆರಂಭಿಸಲು ಸಂಯೋಜನೆ ನೀಡುವ ಬಗ್ಗೆ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000 ರ ಪ್ರಕರಣ 59(11) ರಡಿ ಅಗತ್ಯವಾಗುವ ಸರ್ಕಾರದ ಶಿಫಾರಸ್ಸು ಕೋರಿ ಕಾಲೇಜಿನ ಅರ್ಜಿ, ಸ್ಥಳೀಯ ವಿಚಾರಣೆ ಸಮಿತಿಯ ವರದಿ ಹಾಗೂ ಸಿಂಡಿಕೇಟ್/ವಿದ್ಯಾವಿಷಯಕ ಪರಿಷತ್ತುಗಳ ಗೊತ್ತುವಳಿಗಳ ದಾಖಲೆಗಳೊಂದಿಗೆ UUCMS ಆನ್ ಲೈನ್ ತಂತ್ರಾಂಶದಲ್ಲಿ ಉಲ್ಲೇಖ(2) ಪತ್ರದನ್ವಯ ಸಲ್ಲಿಸಲಾಗಿರುವ ಪ್ರಸ್ತಾವನೆಯನ್ನು ಪರಿಶೀಲಿಸಿ ಉಲ್ಲೇಖ(3)ರ ಪತ್ರದಲ್ಲಿ ಹೊಸ ಕೋರ್ಸುಗಳನ್ನು ಆರಂಭಿಸಲು ಸಂಯೋಜನೆಗೆ ಶಿಫಾರಸ್ಸು ಮಾಡಲಾಗಿತ್ತು.

ಆದರೆ, ಸಂಯೋಜನಾ ಪ್ರಸ್ತಾವನೆಯಲ್ಲಿ ಹೊಸ ಕಾಲೇಜನ್ನು ಪ್ರಾರಂಭಿಸಲು ಅನುಮೋದನೆ ಕೋರಲಾಗಿದ್ದು, ಉಲ್ಲೇಖ(3)ರ ಪತ್ರದಲ್ಲಿ ಹೊಸ ಕೋರ್ಸುಗಳನ್ನು ಆರಂಭಿಸಲು ಸಂಯೋಜನೆಗೆ ಶಿಫಾರಸ್ಸು ಮಾಡಲಾಗಿತ್ತು. ಪ್ರಸ್ತುತ ಈ ಶಿಫಾರಸ್ಸನ್ನು ಪುನರಾವಲೋಕಿಸುವ ಮೂಲಕ ಹಿಂಪಡೆಯಲಾಗಿದೆ.

ಅದರಂತೆ ಉಲ್ಲೇಖ(4)ರಲ್ಲಿನ ಕಾಲೇಜನ್ನು ಬಿ.ಕಾಂ ಮತ್ತು ಬಿ.ಸಿ.ಎ. ವ್ಯಾಸಂಗಕ್ರಮಗಳೊಂದಿಗೆ ಕಾಲೇಜನ್ನು ಹೊಸದಾಗಿ ಪ್ರಾರಂಭಿಸಲು ಸಂಯೋಜನೆಯನ್ನು ಪುನಃ ಪರಿಶೀಲಿಸಲಾಗಿದೆ.

ಸ್ಥಳೀಯ ವಿಚಾರಣೆ ಸಮಿತಿಯ ಅವಲೋಕನೆ ಮತ್ತು ತೀರ್ಮಾನಗಳನ್ನು ಪರಿಗಣಿಸಿದ ತರುವಾಯ ಬೆಂಗಳೂರು ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ತು ಹಾಗೂ ಸಿಂಡಿಕೇಟ್ ಪ್ರಾಧಿಕಾರಗಳು ಅಂಗೀಕರಿಸಿದ ಗೊತ್ತುವಳಿಗಳನ್ನು ಅನುಸರಿಸಿ ಹಾಗೂ ಶೈಕ್ಷಣಿಕ/ಭೌತಿಕ ಹಾಗೂ ನಾಗರೀಕ ಮೂಲ ಸೌಕರ್ಯಗಳ ಲಭ್ಯತೆ ಹಾಗೂ ಗುಣಮಟ್ಟದ ಕಾರ್ಯನಿರ್ವಹಣೆಯ ಖಚಿತತೆಗಾಗಿ ಉಲ್ಲೇಖ (1) ರ ಸರ್ಕಾರದ ಆದೇಶದಲ್ಲಿ ನಿಗದಿಪಡಿಸಲಾದ ನಿಯತಾಂಕಗಳ ಹಾಗೂ ಸೂಚ್ಯಾಂಕಗಳ ಪೂರೈಕೆಯನ್ನು ದೃಢಪಡಿಸಿಕೊಂಡು, ಪ್ರಸ್ತಾವನೆಯನ್ನು ಪರಿಗಣಿಸಲಾಗಿದೆ.

ಅದರಂತೆ, ಜ್ಯೋತಿ ಸಂಜೆ ಕಾಲೇಜು, ನಂ.40/05, 394/3, ತಾತಗುಣಿ, ಕನಕಪುರ ರಸ್ತೆ, ಬೆಂಗಳೂರು-560082. ಇಲ್ಲಿ ಬಿ.ಕಾಂ ಮತ್ತು ಬಿ.ಸಿ.ಎ. ಸ್ನಾತಕ ವ್ಯಾಸಂಗಕ್ರಮವನ್ನು 2022-23ನೇ ಶೈಕ್ಷಣಿಕ ಸಾಲಿನಿಂದ ಬಿ.ಕಾಂ ಮತ್ತು ಬಿ.ಸಿ.ಎ. ವ್ಯಾಸಂಗಕ್ರಮಗಳೊಂದಿಗೆ ಕಾಲೇಜನ್ನು ಕೆಳಕಂಡಂತೆ ಹೊಸದಾಗಿ ಆರಂಭಿಸಲು ಸಂಯೋಜನೆ ನೀಡುವ ಕುರಿತು ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000 ರ ಪ್ರಕರಣ 59(11) ರಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಶಿಫಾರಸ್ಸು ಮಾಡಲಾಗಿದೆ.

| **ವ್ಯಾಸಂಗಕ್ರಮ** | **ವಿಷಯ ಸಮೂಹ** | **ವಿದ್ಯಾರ್ಥಿ ಪ್ರಮಾಣ** |
|---|---|---|
| ಬಿ.ಕಾಂ | ವಿವಿ ಪರಿನಿಯಮಾವಳಿಯಂತೆ | 100 |
| ಬಿ.ಸಿ.ಎ. | ವಿವಿ ಪರಿನಿಯಮಾವಳಿಯಂತೆ | 40 |

**<u>ಷರತ್ತು ಮತ್ತು ನಿಬಂದನೆಗಳು:-</u>**

1. ಜ್ಯೋತಿ ಸಂಜೆ ಕಾಲೇಜು, 2002-23ನೇ ಶೈಕ್ಷಣಿಕ ಸಾಲಿನಿಂದ ಮೇಲ್ಕಂಡಂತೆ ಹೊಸ ಕಾಲೇಜು ಮತ್ತು ಹೊಸ ಕೋರ್ಸು ಸಂಯೋಜನೆ ನೀಡುವುದು ಸ್ಥಳೀಯ ವಿಚಾರಣೆ ಸಮಿತಿಯ ಷರತ್ತುಗಳು ಸೇರಿದಂತೆ ಈ ಕೆಳಕಂಡ ಎಲ್ಲಾ ಷರತ್ತುಗಳನ್ನು ಪಾಲಿಸುವ ನಿಬಂಧನೆಗೆ ಒಳಪಟ್ಟಿರುತ್ತದೆ.

2. 6 ತಿಂಗಳುಗಳ ಒಳಗಾಗಿ ಕಟ್ಟಡ ಸುರಕ್ಷತೆ ಪ್ರಮಾಣ ಪತ್ರವನ್ನು ಲೋಕೋಪಯೋಗಿ ಇಲಾಖೆಯಿಂದ ಪಡೆಯತಕ್ಕದ್ದು, ವಿದ್ಯಾರ್ಥಿ ತಲಾವಾರು ಗ್ರಂಥಾಲಯ ಪ್ರದೇಶದ ಲಭ್ಯತೆಯ ನಿಯತಾಂಕವನ್ನು ಪೂರೈಸತಕ್ಕದ್ದು. ಯುಜಿಸಿ ವಿನಿಯಮಗಳನ್ವಯ ಅಗತ್ಯವಾಗುವ ಮೂಲ ಧನ ನಿರ್ವಹಣೆ ನಿಯತಾಂಕವನ್ನು ಹಾಗೂ ಯುಜಿಸಿ ವಿನಿಯಮಗಳನ್ವಯ ಮುಚ್ಚಳಿಕೆಯ ಕಾರ್ಯಗತಗೊಳಿಸುವಿಕೆ ನಿಯತಾಂಕವನ್ನು ಪೂರೈಸತಕ್ಕದ್ದು. ತಪ್ಪಿದಲ್ಲಿ ಹೊಸ ಕಾಲೇಜಿನ ಸಂಯೋಜನೆಗೆ ಈ ಪತ್ರದನ್ವಯ ಮಾಡಲಾದ ಶಿಫಾರಸ್ಸು ಸ್ವಯಂಚಾಲಿತವಾಗಿ ರದ್ದಾಗುತ್ತದೆ.

3. ಸ್ಥಳೀಯ ವಿಚಾರಣಾ ಸಮಿತಿಯ ಹಾಗೂ ಈ ಪತ್ರದಲ್ಲಿನ ಷರತ್ತುಗಳನ್ನು ಕಾಲೇಜು ಪರಿಪಾಲಿಸುವುದನ್ನು ವಿಶ್ವವಿದ್ಯಾಲಯವು ಖಚಿತಪಡಿಸಿಕೊಳ್ಳತಕ್ಕದ್ದು. ತಪ್ಪಿದಲ್ಲಿ 2023-24ನೇ ಸಾಲಿನಿಂದ ಸಂಯೋಜನೆಯನ್ನು ರದ್ದುಪಡಿಸಲು ಬೆಂಗಳೂರು ವಿಶ್ವವಿದ್ಯಾಲಯಕ್ಕೆ ಸೂಚಿಸಲಾಗಿದೆ.
4. ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನರಹಿತ ಕೋರ್ಸೆಂದು ಪರಿಗಣಿಸತಕ್ಕದ್ದು;
5. ಮೇಲ್ಕಂಡ ಕಾಲೇಜು ವಿಶ್ವವಿದ್ಯಾಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು.
6. ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ;
7. ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;
8. ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;
9. ಕಾಲೇಜು/ಆಡಳಿತ ಮಂಡಳಿಯು ಶೇ.50 ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗದಪಡಿತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗದಿಪಡಿಸಿದ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು, ವಿಶ್ವವಿದ್ಯಾಲಯವು ನಿಗದಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ;
10. ದಿನಾಂಕ:13-8-1997 ರಂದು ವಿಶಾಖ v/s ರಾಜಸ್ತಾನ ಸರ್ಕಾರ ಮೊಕದ್ದಮೆಯಲ್ಲಿ ಸುಪ್ರೀಂ ಕೋರ್ಟು ನೀಡಿರುವ ತೀರ್ಪಿನನುಸಾರ ಯಾವುದೇ ವ್ಯಕ್ತಿ/ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕುರುಕುಳ ನೀಡಿದಲ್ಲಿ ಅದು ಸಂಜ್ಞೇಯ ಅಪರಾಧ(Cognizable Offence) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ/ ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು' ಮತ್ತು ಆ ವ್ಯಕ್ತಿ/ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು; ಮುಂದುವರೆದು, ಕಾಲೇಜು/ಆಡಳಿತ ಮಂಡಳಿಯು ಸುಪ್ರೀಂ ಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ; ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು;
11. ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸನ್ನು ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ಆಡಳಿತ ಮಂಡಳಿಯು ವಿದ್ಯಾರ್ಥಿ/ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು;
12. ಕಾಲೇಜಿನ ಆಡಳಿತ ಮಂಡಳಿಯು ಯಾವುದೇ ವಿದ್ಯಾರ್ಥಿಯ ಅಂಕಪಟ್ಟಿ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾಲಯವು ಅನುಮೋದಿಸುವವರೆಗೆ ಅಥವಾ 6 ತಿಂಗಳ ಅವಧಿಗೆ ಮೀರಿ ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ;
13. ಕಾಲೇಜಿನ ಆಡಳಿತ ಮಂಡಳಿಯು ಯಾವುದೇ ವಿದ್ಯಾರ್ಥಿಯು ವರ್ಗಾವಣೆ ಪ್ರಮಾಣಪತ್ರ ಬೇಕೆಂದು ಅಪೇಕ್ಷಿಸಿ ಅರ್ಜಿ ಸಲ್ಲಿಸಿದಲ್ಲಿ, ಅದನ್ನು ವಿತರಿಸುವಾಗ ವಿದ್ಯಾರ್ಥಿಗೆ ತೊಂದರೆ ನೀಡತಕ್ಕದ್ದಲ್ಲ; ಹಾಗೂ ಅವರಿಂದ ಬಾಕಿ ಉಳಿದಿರುವ ಶೈಕ್ಷಣಿಕ ವರ್ಷ/ಸೆಮಿಸ್ಟರ್ ಅವಧಿಗೆ ಮಾತ್ರ ಬೋಧಕ ಶುಲ್ಕವನ್ನು ಪಡೆಯತಕ್ಕದ್ದು ಹಾಗೂ ಬೇರೆ ಯಾವುದೇ ಮೊತ್ತವನ್ನು ಪಡೆಯತಕ್ಕದ್ದಲ್ಲ.

14. ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ;
15. ಪ್ರವಾಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

ತಮ್ಮ ನಂಬುಗೆಯ,

**(ನಂದಕುಮಾರ್. ಬಿ)**
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ(ವಿಶ್ವವಿದ್ಯಾಲಯಗಳು-2)

ಪ್ರತಿ:-

1. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು,
2. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
3. ಪ್ರಾಂಶುಪಾಲರು,, ಜ್ಯೋತಿ ಸಂಜೆ ಕಾಲೇಜು, ನಂ.40/05, 394/3, ತಾತಗುಣಿ, ಕನಕಪುರ ರಸ್ತೆ, ಬೆಂಗಳೂರು-560082.
4. ಇ-ಸಮನ್ವಯಾಧಿಕಾರಿ, ಉನ್ನತ ಶಿಕ್ಷಣ ಇಲಾಖೆ ಇವರಿಗೆ (ಉನ್ನತ ಶಿಕ್ಷಣ ಇಲಾಖೆಯ ಜಾಲತಾಣದಲ್ಲಿ ಪ್ರಕಟಿಸಲು)